ನೇರ ನಿರ್ಭೀತ ನಿಷ್ಪಕ್ಷ...

ಸಾಕ್ಷಾತ್ ಸುದ್ದಿ

epaper: saakshathsuddi.com ಕನ್ನಡ ದೈನಿಕ e-mail: saakshathsuddi@gmail.com

ಬೆಂಗಳೂರು । ಬೆಂಗಳೂರು ಗ್ರಾಮಾಂತರ । ಹಾಸನ । ತುಮಕೂರು । ರಾಮನಗರ ಸಂಪಾದಕ: ಎಂ.ಎನ್.ಮಹದೇವಗೌಡ ಮಂಡ್ಯ । ಮೈಸೂರು । ಚಾಮರಾಜನಗರ

RNI.No.KARKAN/2010/33168 ಬುಧವಾರ 14-11-2018 ಸಂಪುಟ - 8 ಸಂಚಿಕೆ - 251 ಪುಟ - 8 ₹ 3.00



ಮಿ-ಟೂ ಆರೋಪ: ನಿರ್ದೇಶಕ ಶ್ರೀವತ್ಸ ಕ್ಷಮೆ ಕೋರಿದ ಸಂಜನಾ

ಪುಟ 8

ಮಕ್ಕಳ ದಿನಾಚರಣೆ: 12 ವರ್ಷದೊಳಗಿನ ಮಕ್ಕಳಿಗೆ ಮೃಗಾಲಯಕ್ಕೆ ಉಚಿತ ಪ್ರವೇಶ

ಪುಟ 5

ಅನಂತ್ ಅಂತಿಮ ದರ್ಶನ ಪಡೆದ ದೆಹಲಿ ದಂಡು ಅಶ್ರುತರ್ಪಣ ಸಲ್ಲಿಸಲು ಕೇಂದ್ರವೇ ಬೆಂಗಳೂರಿಗೆ ಶಿಫ್ಟ್

ಪುಟ 8

ಕಮಲ ಕಣ್ಮಣಿ 'ಅನಂತ'ದಲ್ಲಿ ಲೀನ

ಸಕಲ ಸರ್ಕಾರಿ ಗೌರವಗಳೊಂದಿಗೆ ಅನಂತ್‌ಕುಮಾರ್‌ಗೆ ಭಾವಪೂರ್ಣ ವಿದಾಯ

ಬೆಂಗಳೂರು: ಕೇಂದ್ರ ಸಚಿವ, ಕಮಲ ಪಕ್ಷದ ಕಣ್ಮಣಿ, ರಾಷ್ಟ್ರ ರಾಜಧಾನಿಯಲ್ಲಿ ಕರ್ನಾಟಕದ ಅಸ್ಮಿತೆ ಕಾಯ್ದಿದ್ದ ಪ್ರಭಾವಿ ನಾಯಕ ಹೆಚ್.ಎನ್. ಅನಂತ್‌ಕುಮಾರ್ ಅವರು ಮಂಗಳವಾರ ಮಧ್ಯಾಹ್ನ 'ಅನಂತ'ದಲ್ಲಿ ಲೀನವಾದರು. ಚಾಮರಾಜಪೇಟೆಯ ಹಿಂದೂ ರುದ್ರಭೂಮಿಯಲ್ಲಿ ಸಕಲ ಸರ್ಕಾರಿ ಗೌರವ, ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಅಂತ್ಯಕ್ರಿಯೆ ನೆರವೇರಿತು.

ಸೋಮವಾರ ಬೆಂಗಳೂರಿನ ಶಂಕರ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದ ಅನಂತ್‌ಕುಮಾರ್ ಅವರ ಪಾರ್ಥಿವ ಶರೀರವನ್ನು ಮಂಗಳವಾರ ಬಿಜೆಪಿ ಕಚೇರಿ ಹಾಗೂ ಬಸವನಗುಡಿಯ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಇಡಲಾಗಿತ್ತು. ಮಧ್ಯಾಹ್ನದ ವೇಳೆಗೆ ಅಂತಿಮ ಯಾತ್ರೆ ಚಾಮರಾಜಪೇಟೆಯ ಟಿ.ಆರ್. ಮಿಲ್ ಸಮೀಪವಿರುವ ಹಿಂದೂ ರುದ್ರಭೂಮಿವರೆಗೆ ನಡೆಯಿತು. ಅಲ್ಲಿಯೇ ಬ್ರಾಹ್ಮಣ ವಿಧಿ ವಿಧಾನಗಳೊಂದಿಗೆ ಅಂತ್ಯಸಂಸ್ಕಾರ ಮಾಡಲಾಯಿತು.

ಅನುಜನಿಂದ ಚಿತೆಗೆ ಅಗ್ನಿಸ್ಪರ್ಶ: ಸುಮಾರು 45 ನಿಮಿಷಗಳ ಕಾಲ ಬ್ರಾಹ್ಮಣ ಸಮುದಾಯದ ಆಶ್ವಲಾಯನ ಸ್ಮಾರ್ತ ಸಂಪ್ರದಾಯದಂತೆ ಅಂತಿಮ ವಿಧಿ ವಿಧಾನ ನಡೆಯಿತು. ಶಾಸ್ತ್ರ ಸಂಪ್ರದಾಯ, ಪ್ರಾಯಶ್ಚಿತ್ತ ಸಂಕಲ್ಪ ಮಾಡಲಾಯಿತು. ಚಿತೆಯ ಮೇಲೆ ಪಾರ್ಥಿವ ಶರೀರವಿಟ್ಟು ದಹ್ಯಮಾನ ಮಂತ್ರ ಪಠಣ ಮಾಡಿದ ಬಳಿಕ ಶವದ ಬಲ ಭಾಗಕ್ಕೆ ಅನಂತ್‌ಕುಮಾರ್ ಅವರ ಸಹೋದರ ನಂದಕುಮಾರ್ ಅಗ್ನಿಸ್ಪರ್ಶ ಮಾಡಿದರು. ಸಕಲ ವಿಧಿ ವಿಧಾನಗಳನ್ನು ಪೂರೈಸಿದರು.

ಸರ್ವೆ ಸೌದೆ, ಗಂಧ, ತುಪ್ಪ, ಮುಂತಾದವುಗಳನ್ನು ಬಳಸಿ ಬಾಕ್ಸ್ ನಂ. 2 ಮತ್ತು 3ರ ಮಧ್ಯೆ ಅನಂತ್‌ಕುಮಾರ್ ಅವರ ಚಿತೆಗೆ ಭೂ ಸ್ಪರ್ಶ ಮಾಡಲಾಯಿತು. ಸರ್ಕಾರಿ ಗೌರವಾರ್ಥ ಸಲ್ಲಿಕೆಯಾಗಿ ಕುಶಾಲ ತೋಪು ಸಿಡಿಸಿ, ಭಾರತೀಯ ಸೇನೆಯಿಂದಲೂ ಗೌರವ ಸಲ್ಲಿಸಲಾಯಿತು. ಬಿಜೆಪಿಯ ಆಧಾರಸ್ತಂಭ, ಸಂಘಟನೆಯ ಚತುರನಾಗಿ ಬಹು ಬೇಗನೆ ರಾಜಕೀಯ ಕ್ಷೇತ್ರದಲ್ಲಿ ಬೆಳೆದು ಬಂದ ಅನಂತ್‌ಕುಮಾರ್ ಶಾಶ್ವತ ಇತಿಹಾಸದ ಪುಟ ಸೇರಿದರು.

ಅಂತ್ಯಸಂಸ್ಕಾರದಲ್ಲಿ ಭಾಗವಹಿಸಿದ್ದ ಅನೇಕ ನಾಯಕರು ಅಗಲಿದ ನೆಚ್ಚಿನ ಗೆಳೆಯನನ್ನು ಭಾರವಾದ ಹೃದಯದಿಂದಲೇ ಬೀಳ್ಕೊಟ್ಟರು. ನೆರೆದಿದ್ದ ಅವರ ಅಭಿಮಾನಿಗಳು, ಕಾರ್ಯಕರ್ತರು, ಸ್ನೇಹಿತರು, ಹಿತೈಷಿಗಳು, ಪಕ್ಷದ ಕಾರ್ಯಕರ್ತರು, ವಿವಿಧ ಕ್ಷೇತ್ರಗಳ ಗಣ್ಯರು, ಕೇಂದ್ರ ಸಚಿವರು ಸೇರಿದಂತೆ ಮತ್ತಿತರರು ಅನಂತ್‌ಕುಮಾರ್ ಅಮರ್ ಹೇ, ಮತ್ತೇ ಹುಟ್ಟಿ ಬಾ, ಭಾರತ್ ಮಾತಾ ಕಿ ಜೈ ಎಂಬ ಘೋಷಣೆಗಳನ್ನು ಕೂಗಿದರು. ನೆರೆದಿದ್ದ ಜನಸ್ತೋಮ ಅನಂತ್‌ಕುಮಾರ್ ಅವರು ಪಕ್ಷಕ್ಕೆ ಸಲ್ಲಿಸಿದ ಸೇವೆ, ಪುಟ..7

ಉಪರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು ಅನಂತ್‌ಕುಮಾರ್ ಅಂತಿಮ ದರ್ಶನ ಪಡೆದರು (ಎಡ ಚಿತ್ರ). ಅಗ್ನಿಸ್ಪರ್ಶದ ನಂತರ ಹೊತ್ತಿ ಉರಿದ ಚಿತೆ.

ಪ್ರಮುಖಾಂಶ

- ಬಿಜೆಪಿಯ ಘಟಾನುಘಟಿ ನಾಯಕರು ಅಂತ್ಯಕ್ರಿಯೆಯಲ್ಲಿ ಭಾಗಿ.
- ಕೇಂದ್ರ ಸಂಪುಟದ 30ಕ್ಕೂ ಹೆಚ್ಚು ಸಚಿವರಿಂದ ಅಂತಿಮ ದರ್ಶನ.
- ಸಹೋದರ ನಂದಕುಮಾರ್ ಅವರಿಂದ ಅಣ್ಣನ ಚಿತೆಗೆ ಅಗ್ನಿಸ್ಪರ್ಶ.
- ಸಕಲ ಸರ್ಕಾರಿ ಗೌರವ, ಮಿಲಿಟರಿ ಗೌರವದೊಂದಿಗೆ ಭಾವಪೂರ್ಣ ವಿದಾಯ.
- 1959 ಜುಲೈ 22ರಂದು ಜನಿಸಿದ್ದ 59ರ ಹರೆಯದ ಅನಂತರ ನೆನಪು ಅಜರಾಮರ.

ಶಬರಿಮಲೆ ವಿವಾದ: ತೀರ್ಪು ಮರುಪರಿಶೀಲನೆಗೆ 'ಸುಪ್ರೀಂ' ಒಪ್ಪಿಗೆ

ನವದೆಹಲಿ: ಶಬರಿಮಲೆ ವಿವಾದಕ್ಕೆ ಸಂಬಂಧಿಸಿದ ತೀರ್ಪು ಮರು ಪರಿಶೀಲನೆಗೆ ಸುಪ್ರೀಂಕೋರ್ಟ್ ಒಪ್ಪಿಗೆ ನೀಡಿದೆ.

ಜ. 22ರಂದು ದೇಗುಲದ ಒಳಗಡೆ ಎಲ್ಲಾ ವಯೋಮಾನದ ಮಹಿಳೆಯರಿಗೂ ಅವಕಾಶ ಕಲ್ಪಿಸುವ ತೀರ್ಪು ವಿರೋಧಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ವಿಚಾರಣೆ ನಡೆಸುವುದಾಗಿ ಹೇಳಿದೆ.

ಮುಖ್ಯ ನ್ಯಾಯಾಧೀಶ ರಂಜನ್ ಗೊಗೊಯ್ ನೇತೃತ್ವದಲ್ಲಿನ ನ್ಯಾಯಮೂರ್ತಿಗಳಾದ ಎನ್. ನಾರಿಮನ್, ಎ.ಎಂ. ಖನ್ವಿಲ್‌ಕರ್, ಡಿ.ವೈ ಚಂದ್ರಚೂಡ್ ಮತ್ತು ಇಂದೂ ಮಲ್ಹೋತ್ರಾ ಅವರನ್ನೊಳಗೊಂಡ ಪೀಠದಿಂದ 49 ಪುನರ್ ಪರಿಶೀಲನಾ ಅರ್ಜಿಗಳ ವಿಚಾರಣೆ ನಡೆಯಲಿದೆ.

10ರಿಂದ 50 ವರ್ಷದೊಳಗಿನ ಮಹಿಳೆಯರು ಶಬರಿಮಲೆ ಅಯ್ಯಪ್ಪ ದೇಗುಲ ಪ್ರವೇಶಿಸಲು ಅವಕಾಶ ನೀಡಿ ಸೆ. 28ರಂದು ಸುಪ್ರೀಂಕೋರ್ಟ್ ನೀಡಿರುವ ತೀರ್ಪಿನ ಪುನರ್ ಪರಿಶೀಲನೆಗಾಗಿ ಉನ್ನತ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲಾಗಿದೆ.

ಐವರು ನ್ಯಾಯಾಧೀಶರನ್ನೊಳಗೊಂಡ ಸಾಂವಿಧಾನಿಕ ಪೀಠದಲ್ಲಿ 4:1ರ ಅನುಪಾತದಲ್ಲಿ ಎಲ್ಲಾ ಮಹಿಳೆಯರಿಗೂ ಶಬರಿಮಲೆ ಪ್ರವೇಶ ಕಲ್ಪಿಸುವ ತೀರ್ಪು ಪ್ರಕಟಿಸಲಾಗಿತ್ತು.

ಆದಾಗ್ಯೂ, ಸುಪ್ರೀಂಕೋರ್ಟ್ ಆದೇಶದ ವಿರುದ್ಧ ಅಯ್ಯಪ್ಪ ಭಕ್ತಾಧಿಗಳು ಹಾಗೂ ಬಲಪಂಥೀಯ ಸಂಘಟನೆಗಳಿಂದ ಬೃಹತ್ ಪ್ರತಿಭಟನೆ ನಡೆಸಲಾಗಿತ್ತು.

ಇಬ್ಬರು ಪತ್ರಕರ್ತೆಯರೂ ಸೇರಿದಂತೆ ಒಟ್ಟು 14 ಮಹಿಳೆಯರು ಪೊಲೀಸರ ಭದ್ರತೆಯಲ್ಲಿ ದೇಗುಲ ಪ್ರವೇಶಿಸಲು ಯತ್ನಿಸಿದರಾದರೂ ಮಧ್ಯ ದಾರಿಯಲ್ಲಿಯೇ ಅವರನ್ನು ತಡೆದ ಭಕ್ತಾಧಿಗಳು ಬಲವಂತದಿಂದ ಹಿಂದಕ್ಕೆ ಕಳುಹಿಸಿದ್ದರು.

ಹನಿ ಹನಿ

ಭತ್ತದ ಬೆಲೆ ಕುಸಿತ: ರೈತರ ನೆರವಿಗೆ ರಾಜ್ಯ ಸರ್ಕಾರ

ಮಾರುಕಟ್ಟೆ ಮಧ್ಯಪ್ರವೇಶಕ್ಕೆ ಸಿಎಂ ಸೂಚನೆ

ಬೆಂಗಳೂರು: ಭತ್ತದ ಬೆಲೆ ಕುಸಿತದಿಂದ ಕಂಗೆಟ್ಟಿರುವ ರೈತರ ಸಂಕಷ್ಟಕ್ಕೆ ಧಾವಿಸಿರುವ ರಾಜ್ಯ ಸರ್ಕಾರ, ಪ್ರತಿ ಕ್ವಿಂಟಾಲ್ ಭತ್ತಕ್ಕೆ 1600ರೂ. ನಂತೆ ಖರೀದಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದೆ.

ಗೃಹ ಕಚೇರಿ ಕೃಷ್ಣಾದಲ್ಲಿ ಈ ಸಂಬಂಧ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಉನ್ನತ ಅಧಿಕಾರಿಗಳ ಸಭೆ ನಡೆಸಿ, ತಕ್ಷಣವೇ ಮಾರುಕಟ್ಟೆ ಮೂಲಕ ಪ್ರತಿ ಕ್ವಿಂಟಾಲ್ ಭತ್ತಕ್ಕೆ 1600 ರೂ. ನಂತೆ ಖರೀದಿಸಲು ಅಧಿಕಾರಿಗಳಿಗೆ ಆದೇಶ ನೀಡಿದರು. ಪಶು ಸಂಗೋಪನೆ ಹಾಗೂ ಮೀನುಗಾರಿಕೆ ಸಚಿವ ನಾಡಗೌಡ ವೆಂಕಟರಾವ್ ಅವರು, ಭತ್ತದ ಬೆಳೆಯ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಮುಖ್ಯಮಂತ್ರಿ, ಪುಟ..7

ದೇಶಕ್ಕೆ ಮೋದಿ ವಂಚನೆ: ರಾಹುಲ್ ವಾಗ್ದಾಳಿ

ರಾಯಪುರ, (ಛತ್ತೀಸ್‌ಘಡ): ರಫೇಲ್ ಯುದ್ಧ ವಿಮಾನ ತಯಾರಿಕ ಒಪ್ಪಂದವನ್ನು ಹಿಂದೂಸ್ತಾನ್ ಏರೋನಾಟಿಕಲ್ ಸಂಸ್ಥೆ (ಹೆಚ್‌ಎಎಲ್) ನಿಂದ ಪ್ರಧಾನಿ ನರೇಂದ್ರ ಮೋದಿ ಕಸಿದುಕೊಂಡು ದೇಶಕ್ಕೆ ವಂಚಿಸಿದ್ದಾರೆ ಎಂದು ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ಮಂಗಳವಾರ ಆರೋಪಿಸಿದ್ದಾರೆ.

ಹೆಚ್‌ಎಎಲ್ ಕಾರ್ಮಿಕರಿಗೆ ರಫೇಲ್ ವಿಮಾನ ತಯಾರಿಕ ಅವಕಾಶ ನೀಡಿದ್ದರೇ ಇಲ್ಲಿನ ಸಾವಿರಾರು ಕಾರ್ಮಿಕರಿಗೆ ಉದ್ಯೋಗ ಸಿಗುತ್ತಿತ್ತು. ಅದನ್ನು ಕಸಿದುಕೊಂಡು ಅನಿಲ್ ಅಂಬಾನಿ ಯೊಂದಿಗೆ ಫ್ರಾನ್ಸ್‌ಗೆ ತೆರಳಿದ್ದಾರೆ ಎಂದು ಆರೋಪಿಸಿದ್ದರು.

ಛತ್ತೀಸ್‌ಘಡ ವಿಧಾನಸಭೆಗೆ ಈ ತಿಂಗಳ 20ರಂದು ನಡೆಯಲಿರುವ 2ನೇ ಹಂತದ ಚುನಾವಣಾ ಪ್ರಚಾರ ರ‍್ಯಾಲಿಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು ರಫೇಲ್ ವಿಮಾನ ಗುತ್ತಿಗೆಯನ್ನು ಹೆಚ್‌ಎಎಲ್‌ಗೆ ನೀಡದಿರುವುದು, ಪುಟ..7

ಶ್ರೀಲಂಕಾ ರಾಜಕೀಯ ಬಿಕ್ಕಟ್ಟು ಸಂಸತ್ ವಿಸರ್ಜನೆಗೆ ಸುಪ್ರೀಂ ತಡೆ

ಕೊಲಂಬೊ: ಶ್ರೀಲಂಕಾ ಸಂಸತ್ ವಿಸರ್ಜನೆಗೆ ಲಂಕಾ ಸುಪ್ರೀಂಕೋರ್ಟ್ ಮಂಗಳವಾರ ತಡೆಯಾಜ್ಞೆ ನೀಡಿದ್ದು, ಅಧ್ಯಕ್ಷ ಮೈತ್ರಿಪಾಲ್ ಸಿರಿಸೇನಾ ಅವರಿಗೆ ಭಾರೀ ಹಿನ್ನಡೆಯಾಗಿದೆ.

ಲಂಕಾ ರಾಜಕೀಯ ಬಿಕ್ಕಟ್ಟು ಮಂಗಳವಾರ ಹೊಸ ತಿರುವು ಪಡೆದುಕೊಂಡಿದ್ದು, ಅವಧಿಗಿಂತ ಮೊದಲೇ ಸಂಸತ್ತನ್ನು ವಿಸರ್ಜಿಸಿದ್ದ ಮೈತ್ರಿಪಾಲ್ ಸಿರಿಸೇನಾ ಅವರ ನಿರ್ಧಾರಕ್ಕೆ ಸುಪ್ರೀಂಕೋರ್ಟ್ ತಡೆ ನೀಡಿದೆ.

ಸಂಸತ್ ವಿಸರ್ಜನೆ ಪ್ರಶ್ನಿಸಿ ರಾಜಕೀಯ ಪಕ್ಷಗಳು ಮತ್ತು ಚುನಾವಣಾ ಆಯೋಗದ ಸದಸ್ಯರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕೋರ್ಟ್, ತಾಂತ್ರಿಕ ಕಾರಣಗಳಿಂದಾಗಿ ಶ್ರೀಲಂಕಾ ಅಧ್ಯಕ್ಷ ನಿರ್ಧಾರಕ್ಕೆ ತಡೆ ನೀಡಲಾಗಿದೆ ಎಂದು ತಿಳಿಸಿದೆ.

ಮೈತ್ರಿಪಾಲ್ ಸಿರಿಸೇನಾ ಅವರು ನ. 9ರಂದು ಶ್ರೀಲಂಕಾ ಸಂಸತ್ತನ್ನು ವಿಸರ್ಜಿಸಿದ್ದರು. ಅ. 26ರಂದು ದಿಢೀರ್ ರಾಜಕೀಯ ಬೆಳವಣಿಗೆಯಲ್ಲಿ ಅಧ್ಯಕ್ಷ ಮೈತ್ರಿಪಾಲ್, ಪುಟ..7

ರಫೇಲ್ ಒಪ್ಪಂದದ ಬಗ್ಗೆ ರಾಹುಲ್ ಗಾಂಧಿ ಆರೋಪಗಳೆಲ್ಲ ಸುಳ್ಳು: ಡಸಾಲ್ಟ್ ಸಿಇಓ

ನವದೆಹಲಿ: ರಫೇಲ್ ಒಪ್ಪಂದಕ್ಕಾಗಿ ಮುಖೇಶ್ ಅಂಬಾನಿ ಒಡೆತನದ ರಿಲಯನ್ಸ್ ಸಂಸ್ಥೆಯ ಆಯ್ಕೆ ನಾವು ಮಾಡಿದ್ದೇ ಹೊರತು, ಇದರಲ್ಲಿ ಬೇರೊಬ್ಬರ ಹಸ್ತಕ್ಷೇಪವಿಲ್ಲ. ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ಸುಳ್ಳು ಹೇಳುತ್ತಿದ್ದಾರೆ ಎಂದು ರಫೇಲ್ ಯುದ್ಧ ವಿಮಾನ ತಯಾರಿಕಾ ಸಂಸ್ಥೆ ಡಸಾಲ್ಟ್ ಏವಿಯೇಷನ್‌ನ ಸಿಇಒ ಎರಿಕ್ ಟ್ರ್ಯಾಪಿಯರ್ ಹೇಳಿದ್ದಾರೆ.

ಸುದ್ದಿಸಂಸ್ಥೆಯ ಸಂದರ್ಶನದಲ್ಲಿ ಮಾತನಾಡಿರುವ ಎರಿಕ್ ಟ್ರ್ಯಾಪಿಯರ್, 'ಭಾರತ ಮತ್ತು ಫ್ರಾನ್ಸ್ ನಡುವಿನ ರಫೇಲ್ ಫೈಟರ್ ಜೆಟ್ ಖರೀದಿಯಲ್ಲಿ ಭಾರೀ ಅವ್ಯವಹಾರ ನಡೆದಿದೆ ಎಂಬ ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ಅವರ ಆರೋಪಗಳು ಸಂಪೂರ್ಣ ಸುಳ್ಳು' ಎಂದು ಹೇಳಿದ್ದಾರೆ.

'ನಾನೇನೂ ಸುಳ್ಳು ಹೇಳುತ್ತಿಲ್ಲ, ರಾಹುಲ್ ಗಾಂಧಿ ಅವರ ಆರೋಪಗಳಲ್ಲಿ ಹುರುಳಿಲ್ಲ. ರಫೇಲ್ ಡೀಲ್ ಬಗ್ಗೆ ನಾನು ಈ ಹಿಂದೆ ಮಾಡಿದ್ದ ಘೋಷಣೆಗಳು, ನೀಡಿದ್ದ ಹೇಳಿಕೆಗಳು ಸತ್ಯ. ಸುಳ್ಳು ಹೇಳುವ ಅಗತ್ಯತೆ ನನಗಂತೂ ಇಲ್ಲ. ನನ್ನ ಸಿಇಓ ಹುದ್ದೆಯಲ್ಲಿ ನೀವಿದ್ದರೆ ನೀವೂ ಸುಳ್ಳು ಹೇಳಲಾರಿರಿ ಎಂದು ಟ್ರ್ಯಾಪಿಯರ್ ಹೇಳಿದ್ದಾರೆ.

ಅಂತೆಯೇ ತಮ್ಮ ಫ್ರೆಂಚ್ ಕಂಪೆನಿ ಮತ್ತು ಕಾಂಗ್ರೆಸ್ ಪಕ್ಷದೊಂದಿಗೆ ಹಳೆಯ ಸಂಬಂಧಗಳನ್ನು ನೆನಪಿಸಿಕೊಂಡ ಟ್ರ್ಯಾಪಿಯರ್, 'ನಮ್ಮ ಕಂಪೆನಿ ಭಾರತದೊಂದಿಗೆ ಮೊದಲ ಡೀಲ್ ಮಾಡಿಕೊಂಡದ್ದು 1953ರಲ್ಲಿ. ಆಗಿನ ಪ್ರಧಾನಿ ಜವಾಹರಲಾಲ್ ನೆಹರೂರವರ ಆಡಳಿತಾವಧಿಯಲ್ಲಿ' ಎಂದು ಹೇಳಿದರು. ಡಸಾಲ್ಟ್ ಕಂಪೆನಿಯ ಭಾರತೀಯ ಆಫ್ಸೆಟ್ ಭಾಗೀದಾರ ಕಂಪೆನಿಯಾಗಿ ಅನಿಲ್ ಅಂಬಾನಿ ಅವರ ರಿಲಯನ್ಸ್ ಡಿಫೆನ್ಸ್ ಕಂಪೆನಿಯನ್ನು ಆಯ್ಕೆ ಮಾಡಲಾಗಿರುವ ಬಗ್ಗೆ ಮಾತನಾಡಿದ ಟ್ರ್ಯಾಪಿಯರ್, 'ಈ ಡೀಲ್‌ನಲ್ಲಿ ಹೂಡಲ್ಪಟ್ಟಿರುವ ಹಣವು ರಿಲಯನ್ಸ್ ಕಂಪೆನಿಗೆ ನೇರವಾಗಿ ಹೋಗುವುದಿಲ್ಲ. ಇದೊಂದು ಜಂಟಿ ಉದ್ಯಮವಾಗಿದ್ದು, ಒಪ್ಪಂದದ ಅನ್ವಯ ಈ ಕಾರ್ಯಕ್ಕಾಗಿ ರಿಲಯನ್ಸ್ ನಂತೆಯೇ ಇನ್ನೂ 30 ಸಂಸ್ಥೆಗಳು ಕೈಜೋಡಿಸಿವೆ' ಎಂದು ಸ್ಪಷ್ಟಪಡಿಸಿದರು. 'ತಮ್ಮ ವಿರುದ್ಧ ಹಾಗೂ ತಮ್ಮ ಕಂಪೆನಿ ವಿರುದ್ಧ ಕಾಂಗ್ರೆಸ್, ಪುಟ..7

ವಾಹನ ದಾಖಲೆ ಡಿಜಿಟಲ್ ಮಾದರಿಯಲ್ಲಿ ತೋರಿಸಲು ಅವಕಾಶ ವಾಹನ ಸವಾರರಿಗೆ ಕೇಂದ್ರ ಸರ್ಕಾರ ಸಿಹಿ ಸುದ್ದಿ

ಬೆಂಗಳೂರು: ವಾಹನಗಳ ದಾಖಲೆ, ಪರವಾನಗಿ ಪತ್ರ ವಾಹನದಲ್ಲಿ ಇಲ್ಲ ಎಂಬ ಕಾರಣಕ್ಕೆ ದಂಡ ಪಾವತಿಸುವ ಸವಾರರು ಮತ್ತು ವಾಹನ ಚಾಲಕರಿಗೆ ಸಿಹಿ ಸುದ್ದಿಯೊಂದು ಬಂದಿದೆ. ಈ ಹಿಂದೆ ಪ್ರಸ್ತಾಪವಾಗಿದ್ದಂತೆ ವಾಹನ ದಾಖಲೆಗಳನ್ನು ಡಿಜಿಟಲ್ ಮಾದರಿಯಲ್ಲಿ ತೋರಿಸಲು ಅವಕಾಶ ನೀಡಲು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವಾಲಯ ಮುಂದಾಗಿದೆ.

ನ. 2ರಂದು ಕೇಂದ್ರ ಸಚಿವಾಲಯ ಹೊರಡಿಸಿರುವ ಅಧಿಸೂಚನೆಯಲ್ಲಿ ಈ ಬಗ್ಗೆ ಸ್ಪಷ್ಟ ಮಾಹಿತಿ ನೀಡಲಾಗಿದೆ. ಕೇಂದ್ರ ಮೋಟಾರು ವಾಹನ ನಿಯಮಗಳಿಗೆ ತಿದ್ದುಪಡಿ ತರಲಾಗಿದ್ದು, ವಾಹನ ಮಾಲೀಕರು ತಮ್ಮ ದಾಖಲೆಗಳನ್ನು ಡಿಜಿಟಲ್ ಮಾದರಿಯಲ್ಲಿ ತೋರಿಸಲು ಇದು ಅವಕಾಶ ನೀಡುತ್ತದೆ. ಈಗ ಸಂಚಾರಿ ಪೊಲೀಸರಿಗೆ ವಾಹನಗಳ ದಾಖಲೆಗಳ ಮೂಲ ಪ್ರತಿ ಅಥವಾ ನಕಲಿ ಪ್ರತಿಯನ್ನು ನೇರವಾಗಿ ಪ್ರದರ್ಶಿಸಬೇಕಾಗುತ್ತದೆ. ಆದರೆ ಹೊಸ ನಿಯಮ ಜಾರಿಯಾದರೆ ಮೊಬೈಲ್‌ನಲ್ಲಿ ದಾಖಲೆಗಳನ್ನು ತೋರಿಸಿದರೆ ಸಾಕಾಗುತ್ತದೆ.

ಚಾಲಕ ಮತ್ತು ವಾಹನ ಮಾಲೀಕರು ದಾಖಲೆಗಳನ್ನು ನೇರವಾಗಿ ಮತ್ತು ಡಿಜಿಟಲ್ ಮಾದರಿಯಲ್ಲಿ ತೋರಿಸಬಹುದು ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ವಾಹನದ ಸಾಮರ್ಥ್ಯದ ದಾಖಲೆ, ಪರವಾನಗಿ, ವಾಹನ ಚಾಲನಾ ಪರವಾನಗಿ ಮತ್ತು ಮಾಲಿನ್ಯ ನಿಯಂತ್ರಣ ತಪಾಸಣೆ ಮಾಡಿದ ದಾಖಲೆಗಳನ್ನು ಡಿಜಿಟಲ್ ರೂಪದಲ್ಲಿಯೂ ಸಂಚಾರಿ ಪೊಲೀಸರಿಗೆ ತೋರಿಸಬಹುದಾಗಿದೆ.

ನೋಂದಣಿ, ವಿಮೆ ಮತ್ತಿತರ ದಾಖಲೆಗಳನ್ನು ಈ ವ್ಯವಸ್ಥೆಯೊಳಗೆ ತರಲಾಗಿದೆ. ಆದ್ದರಿಂದ ಇನ್ನು ಮುಂದೆ ಪೊಲೀಸರು ದಾಖಲೆಯ ಮೂಲ ಪ್ರತಿಗಾಗಿ ಒತ್ತಾಯಿಸುವಂತಿಲ್ಲ. ಈಗಾಗಲೇ ಸಂಚಾರ ಪೊಲೀಸರಿಗೆ ಹೊಸ ನಿಯಮದ ಬಗ್ಗೆ ಮಾಹಿತಿ ಲಭ್ಯವಾಗಿದ್ದು, ಡಿಜಿ ಲಾಕರ್ ವ್ಯವಸ್ಥೆ ಅನುಷ್ಠಾನಕ್ಕೆ ಸಿದ್ಧತೆ ನಡೆಸುತ್ತಿದ್ದಾರೆ. ಹೊಸ ಅಧಿಸೂಚನೆಯ ಬಗ್ಗೆ ಮಾಹಿತಿ ಲಭ್ಯವಾಗಿದೆ. ಹೊಸ ವ್ಯವಸ್ಥೆಯನ್ನು ಶೀಘ್ರವೇ ಅನುಷ್ಠಾನಗೊಳಿಸಲಾಗುವುದು. ಈ ವಿಷಯದ ಬಗ್ಗೆ ಸಂಚಾರ ಪೊಲೀಸರಿಗೆ ಮಾಹಿತಿ ಮತ್ತು ಅರಿವು ಮೂಡಿಸಲಾಗುವುದು, ಮುಂದಿನ ವರ್ಷದಿಂದ ಹೊಸ ವ್ಯವಸ್ಥೆಯನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರಲಾಗುವುದು ಎಂದು ಸಂಚಾರ ವಿಭಾಗದ ಹೆಚ್ಚುವರಿ ಪೊಲೀಸ್ ಆಯುಕ್ತ ಪಿ. ಹರಿಶೇಖರನ್ ತಿಳಿಸಿದರು.

ಮಹಾಮೈತ್ರಿ: ನ. 19ರಂದು ಮಮತಾ-ನಾಯ್ಡು ಚರ್ಚೆ



ನವದೆಹಲಿ: ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕೋಮುವಾದಿ ಬಿಜೆಪಿಯನ್ನು ಮಣಿಸಲು ಪಣ ತೊಟ್ಟಿರುವ ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬುನಾಯ್ಡು ಮಹಾಮೈತ್ರಿ ರಚನೆಯ ಪ್ರಕ್ರಿಯೆಗೆ ಇನ್ನಷ್ಟು ತ್ವರಿತ ಗತಿಯಲ್ಲಿ ಚಾಲನೆ ನೀಡಿದ್ದಾರೆ.

ಕರ್ನಾಟಕದಲ್ಲಿ ನಡೆದ ಉಪಚುನಾವಣೆ ಫಲಿತಾಂಶ ಹೊರಬಿದ್ದ ನಂತರ ರಾಜ್ಯಕ್ಕಾಗಮಿಸಿ ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡ ಅವರನ್ನು ಭೇಟಿ ಮಾಡಿ ಮಹಾಮೈತ್ರಿ ಕುರಿತು ಚರ್ಚೆ ನಡೆಸಿದ್ದರು. ಇದೀಗ ನ. 19ರಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರನ್ನು ಭೇಟಿ ಮಾಡಿ ಲೋಕಸಭಾ ಚುನಾವಣೆಗೆ ಬಿಜೆಪಿ ವಿರುದ್ಧ ಮಹಾಮೈತ್ರಿ ಕೂಟ ರಚನೆಗೆ ಮುಂದಾಗಿದ್ದಾರೆ.

ಮುಂದಿನ ವರ್ಷ ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಅಂಗಪಕ್ಷವನ್ನು ಮಣಿಸಲು ಪ್ರತಿಪಕ್ಷಗಳನ್ನು ಒಗ್ಗೂಡಿಸುವ ಕಾರ್ಯದಲ್ಲಿ ಚಂದ್ರಬಾಬು ನಾಯ್ಡು ಮುಂಚೂಣಿಯಲ್ಲಿದ್ದಾರೆ. ಈಗಾಗಲೇ ಹಲವು ನಾಯಕರನ್ನು ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ 42 ಲೋಕಸಭಾ ಕ್ಷೇತ್ರಗಳಿದ್ದು, 2014ರ ಚುನಾವಣೆಯಲ್ಲಿ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ 34 ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವ ಮೂಲಕ ಪಶ್ಚಿಮ ಬಂಗಾಳದಲ್ಲಿ ನರೇಂದ್ರ ಮೋದಿ ಅಲೆ ಇಲ್ಲ ಎಂಬುದನ್ನು ಸಾಬೀತುಪಡಿಸಿದ್ದರು. ಆದರೆ, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ 2 ಸ್ಥಾನ ಹಾಗೂ ಕಾಂಗ್ರೆಸ್ 4, ಎಡ ಪಕ್ಷಗಳು 2 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದವು.

ಕಳೆದ ಬಾರಿಯ ಲೋಕಸಭಾ ಚುನಾವಣೆಯ ಫಲಿತಾಂಶಗಳನ್ನು ಮುಂದಿಟ್ಟುಕೊಂಡು ಮಮತಾ ಬ್ಯಾನರ್ಜಿ ಅವರನ್ನು ಮಹಾಮೈತ್ರಿ ಕೂಟಕ್ಕೆ ಕರೆತರಲು ಚಂದ್ರಬಾಬುನಾಯ್ಡು ಮುಂದಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಈ ಎಲ್ಲ ವಿದ್ಯಮಾನಗಳ ನಡುವೆ ಮಹಾಮೈತ್ರಿ ಕೂಟ ಬೆಂಬಲಿಸುವ ರಾಷ್ಟ್ರ ನಾಯಕರ ಮಹತ್ವದ ಸಭೆ ಈ ತಿಂಗಳ 22ರಂದು ದೆಹಲಿಯಲ್ಲಿ ನಡೆಯಲಿದ್ದು, ರಾಷ್ಟ್ರ ರಾಜಕಾರಣದಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

ಇಂದು ಜನಾರ್ದನ ರೆಡ್ಡಿ ಜಾಮೀನು ತೀರ್ಪು

ಬೆಂಗಳೂರು: ಆಂಬಿಡೆಂಟ್ ಕಂಪನಿ ವಂಚನೆ ಪ್ರಕರಣದಲ್ಲಿ ಜೈಲು ಸೇರಿರುವ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಅವರ ಜಾಮೀನು ಅರ್ಜಿ ವಿಚಾರಣೆ ನಡೆಸಿದ ನಗರದ ಒಂದನೇ ಎಸಿಎಂಎಂ ನ್ಯಾಯಾಲಯ ಇಂದು ತೀರ್ಪು ಪ್ರಕಟಿಸಲಿದೆ.

ಪ್ರಕರಣ ಸಂಬಂಧ ಮಂಗಳವಾರ, ವಾದ-ಪ್ರತಿವಾದ ಆಲಿಸಿದ ನಂತರ ನ್ಯಾಯಮೂರ್ತಿ ಜಗದೀಶ್ ಅವರು, ಜಾಮೀನು ಅರ್ಜಿ ತೀರ್ಪು ಬುಧವಾರ ಪ್ರಕಟಿಸಲಾಗುವುದು ಎಂದು ತಿಳಿಸಿದರು.

ರೆಡ್ಡಿ ವಾದವೇನು?: ಜನಾರ್ದನ ರೆಡ್ಡಿ ಪರ ವಕೀಲ ಸಿ.ಹೆಚ್. ಹನುಮಂತರಾಯ, ಆ್ಯಂಬಿಡೆಂಟ್ ಹೂಡಿಕೆ ಕಂಪನಿ ವಂಚನೆ ಪ್ರಕರಣದಲ್ಲಿ ನಾಲ್ವರು ಆರೋಪಿಗಳಿಗೆ ಜಾಮೀನು ದೊರೆತಿದೆ. ಜತೆಗೆ ಐದನೇ ಆರೋಪಿಗೂ ಮಧ್ಯಂತರ ನಿರೀಕ್ಷಣಾ ಜಾಮೀನು ಸಿಕ್ಕಿದೆ. ಪೊಲೀಸರು ನೋಟಿಸ್ ನೀಡಿದ ಕೂಡಲೇ ನನ್ನ ಕಕ್ಷಿದಾರ(ಜನಾರ್ದನರೆಡ್ಡಿ) ತನಿಖೆಗೆ ಹಾಜರಾಗಿದ್ದಾರೆ ಎಂದು ವಾದಿಸಿದ್ದಾರೆ.

ಆಲಿಖಾನ್ 4ನೇ ಆರೋಪಿಯಿಂದ 57 ಕೆಜಿ ಚಿನ್ನ ಪಡೆದಿದ್ದ. ಆದರೆ ಇದಕ್ಕೂ ಜನಾರ್ದನ ರೆಡ್ಡಿಗೂ ಸಂಬಂಧವಿಲ್ಲ. ಹೀಗೆಂದು ಪೊಲೀಸರು ರಿಮಾಂಡ್ ಅರ್ಜಿಯಲ್ಲಿ ಹೇಳಿದ್ದಾರೆ. ಈ ಬಗ್ಗೆ ಜನಾರ್ದನ ರೆಡ್ಡಿಗೆ ಮಾಹಿತಿ ಇರುವುದು ಒಪ್ಪಿದ್ದಾರೆ. ಅದನ್ನು ಮರಳಿ ಕೊಡಿಸಲು ಯತ್ನಿಸುವುದಾಗಿ ಹೇಳಿದ್ದಾರೆ ಎಂದು ವಿವರಿಸಿದರು ಎನ್ನಲಾಗಿದೆ.

ಜನಾರ್ದನ ರೆಡ್ಡಿ ವಿರುದ್ಧ ಯಾವುದೇ ಆರೋಪವಿಲ್ಲ. ಸಿಬಿಐ ತನಿಖಾ ಸಂಸ್ಥೆಯಲ್ಲಿ ದಾಖಲಾಗಿರುವ ದೂರಿಗೆ ಸಂಬಂಧಪಟ್ಟಂತೆ ಜನಾರ್ದನ ರೆಡ್ಡಿ ಹಾಜರಾಗಬೇಕು. ಹೀಗಾಗಿ ಅವರಿಗೆ ಜಾಮೀನು ನೀಡುವಂತೆ ಹನುಮಂತರಾಯ ನ್ಯಾಯಾಲಯಕ್ಕೆ ಕೋರಿದರು.

ಆ್ಯಂಬಿಡೆಂಟ್ ವಂಚನೆ ಪ್ರಕರಣದಲ್ಲಿ ಬರೋಬ್ಬರಿ 600 ಕೋಟಿ ರೂ.ಗಳಿಗೂ ಹೆಚ್ಚಿನ ಅಕ್ರಮ ನಡೆಸಿ, ಸಾವಿರಾರು ಜನರಿಗೆ ವಂಚಿಸಿದೆ ಎಂದು ಸರ್ಕಾರಿ ವಕೀಲರು ಪ್ರತಿವಾದ ಮಂಡಿಸಲು ಆರಂಭಿಸುತ್ತಿದ್ದಂತೆ ನ್ಯಾ.ಜಗದೀಶ್ ಅವರು ಆ್ಯಂಬಿಡೆಂಟ್ ಮತ್ತು ಜನಾರ್ದನ ರೆಡ್ಡಿಗೆ ಏನು ಸಂಬಂಧ ಎಂದು ಪ್ರಶ್ನೆ ಕೇಳಿದರು ಎಂದು ತಿಳಿದು ಬಂದಿದೆ.

ಹುಡುಕಾಟ: ಆಂಬಿಡೆಂಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂಬಿಕಾ ಜ್ಯುವೆಲರ್ಸ್ ಮಾಲೀಕ ರಮೇಶ್ ಕೊಠಾರಿ ವಿಚಾರಣೆಗಾಗಿ, ಪುಟ..7

ಜಾಮೀನು ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಸಿಸಿಬಿ ನಿರ್ಧಾರ

ಬೆಂಗಳೂರು: ಜಾಮೀನು ಮಂಜೂರು ಮಾಡಿಸಲೇಬೇಕು ಎಂದು ಪಣ ತೊಟ್ಟಿರುವ ಜನಾರ್ದನ ರೆಡ್ಡಿ ಪರ ವಕೀಲ ಚಂದ್ರಶೇಖರ್, ಮಂಗಳವಾರ ಕೋರ್ಟ್‌ನಲ್ಲಿ ಬೇಲ್‌ಗಾಗಿ ಅರ್ಜಿ ಸಲ್ಲಿಸಿದ್ದಾರೆ. ಇದರಿಂದ ತನ್ನ ತನಿಖೆಗೆ ಹಿಂದೇಟು ಆಗಲಿದೆ ಎನ್ನುವುದನ್ನು ಅರಿತಿರುವ ಸಿಸಿಬಿ ಮತ್ತೊಂದು ಪ್ಲಾನ್ ರೂಪಿಸಿದೆ. ಜನಾರ್ದನ ರೆಡ್ಡಿ ಪರ ವಕೀಲರಿಗೆ ಶಾಕ್ ನೀಡಲು ಮುಂದಾಗಿರುವ ಸಿಸಿಬಿ ಅಧಿಕಾರಿಗಳು, ಜಾಮೀನು ನೀಡೋದಕ್ಕೆ ವಿರೋಧ ವ್ಯಕ್ತಪಡಿಸಿ ಆಕ್ಷೇಪಣೆ ಸಲ್ಲಿಸಲು ನಿರ್ಧರಿಸಿದ್ದಾರೆ. ವಂಚನೆ ಪ್ರಕರಣದಲ್ಲಿ ಇದುವರೆಗೂ ಕೋಟಿ ಕೋಟಿ ಹಣ ಗೋಲ್ ಮಾಲ್ ನಡೆದಿದೆ. ಈ ಎಲ್ಲಾ ಹಣವನ್ನು ಮೋಸ ಹೋದವರಿಗೆ ವಾಪಸ್ ಕೊಡಬೇಕು. ಸಿಸಿಬಿ ಕಚೇರಿಗೆ ನೂರಾರು ಜನ ಆಗಮಿಸುತ್ತಿದ್ದಾರೆ. ಪ್ರಕರಣ ತನಿಖಾ ಹಂತದಲ್ಲಿದೆ, ಒಂದು ವೇಳೆ ಬೇಲ್ ಕೊಟ್ಟರೆ ಆರೋಪಿ ಎಸ್ಕೇಪ್ ಆಗುತ್ತಾರೆ. ಹೀಗಾಗಿ ಯಾವುದೇ ಕಾರಣಕ್ಕೂ ಜಾಮೀನು ನೀಡದಂತೆ ಆಕ್ಷೇಪಣೆ ಸಲ್ಲಿಸಲು ಸಿಸಿಬಿ ನಿರ್ಧರಿಸಿದೆ ಎನ್ನುವ ಮಾಹಿತಿ ಲಭ್ಯವಾಗಿದೆ.